ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**03.03.2025** **13.10 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ಗುಜರಾತ್‌ನ ಜುನಾಗಢ್‌ನಲ್ಲಿ ರಾಷ್ಟ್ರೀಯ ವನ್ಯಜೀವಿ ಕೇಂದ್ರಕ್ಕೆ ಪ್ರಧಾನಿ ನರೇಂದ್ರ ಮೋದಿ ವರ್ಚುವಲ್ ಮೂಲಕ ಶಂಕುಸ್ಥಾಪನೆ**

**೨. ಕರ್ನಾಟಕ ವಿಧಾನಮಂಡಲದ ಬಜೆಟ್ ಅಧಿವೇಶನ ಆರಂಭ ; ರಾಜ್ಯ ಸರ್ಕಾರದ ಸಾಧನೆಗಳ ಬಗ್ಗೆ ರಾಜ್ಯಪಾಲರಿಂದ ಶ್ಲಾಘನೆ**

**೩. ನವದೆಹಲಿಯಲ್ಲಿಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಬೆಲ್ಜಿಯಂ ಸಹವರ್ತಿಯೊಂದಿಗೆ ಸಮಾಲೋಚನೆ**

**೪. ಐಸಿಸಿ ಚಾಂಪಿಯನ್ಸ್ ಟ್ರೋಫಿ ; ಮೊದಲನೇ ಸೆಮಿ ಫೈನಲ್‌ನಲ್ಲಿ ನಾಳೆ ಭಾರತ-ಆಸ್ಟ್ರೇಲಿಯಾ ಸೆಣಸು**

**<><*<><>*><>**

ಇಂದು ವಿಶ್ವ ವನ್ಯಜೀವಿ ದಿನ ಆಚರಿಸಲಾಗುತ್ತಿದೆ. ವನ್ಯಜೀವಿ ಹಾಗೂ ಸಸ್ಯಗಳನ್ನು ಸಂರಕ್ಷಿಸಲು ಪ್ರಾಮುಖ್ಯತೆ ಈ ದಿನ ಸಾರುತ್ತವೆ. ದೇಶದಲ್ಲಿ ವನ್ಯಜೀವಿ ಸಂರಕ್ಷಣೆಗಾಗಿ ಕೇಂದ್ರ ಸರ್ಕಾರ ಹಲವಾರು ಉಪಕ್ರಮಗಳನ್ನು ಕೈಗೊಂಡಿದೆ. ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ವನ್ಯಜೀವಿ ಸಂರಕ್ಷಣೆ ಶಾಸಕಾಂಗ ಕ್ರಮಗಳು ನೀತಿಗಳು ಮತ್ತು ಉಪಕ್ರಮಗಳ ಸಮಗ್ರ ಚೌಕಟ್ಟನ್ನು ಸ್ಥಾಪಿಸಿದೆ. ಭಾರತ ವನ್ಯಜೀವಿ ಪ್ರಭೇದಗಳನ್ನು ಒಳಗೊಂಡ ಶ್ರೀಮಂತ ಹಾಗೂ ವೈವಿಧ್ಯಮಯ ಪರಿಸರ ವ್ಯವಸ್ಥೆಯನ್ನು ಹೊಂದಿದೆ. ದೇಶದಲ್ಲಿ ನೂರಾರು ರಾಷ್ಟ್ರೀಯ ಉದ್ಯಾನವನ, ೫೭೩ ವನ್ಯಜೀವಿ ಅಭಯಾರಣ್ಯ ಮತ್ತು ೧೧೫ ಸಂರಕ್ಷಿತ ಅರಣ್ಯ ಪ್ರದೇಶ ಸೇರಿದಂತೆ ಸಾವಿರಕ್ಕೂ ಹೆಚ್ಚು ಸಂರಕ್ಷಿತ ಪ್ರದೇಶಗಳ ಜಾಲವನ್ನು ಹೊಂದಿದೆ. ವನ್ಯಜೀವಿ ಸಂರಕ್ಷಣೆಗೆ ಕೇಂದ್ರ ಸರ್ಕಾರ ವಿಶೇಷ ಗಮನ ನೀಡಿದ್ದು, ಆಯವ್ಯಯದಲ್ಲಿ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯಕ್ಕೆ ೪೧೨ ಕೋಟಿ ರೂಪಾಯಿ ಅನುದಾನ ಮೀಸಲಿಟ್ಟಿದೆ. ಇದು ಕಳೆದ ಹಣಕಾಸು ವರ್ಷಕ್ಕೆ ಹೋಲಿಸಿದರೆ ಶೇಕಡ ೬ರಷ್ಟು ಅಧಿಕ ಮೊತ್ತವಾಗಿದೆ. ಇದರ ಜೊತೆಗೆ ೪೫೦ ಕೋಟಿ ರೂಪಾಯಿ ವನ್ಯಜೀವಿ ಆವಾಸ ಸ್ಥಾನಗಳ ಸಮಗ್ರ ಅಭಿವೃದ್ಧಿಗಾಗಿ

ಮೀಸಲಿಡಲಾಗಿದೆ. ಭಾರತ ೫೪ ಹುಲಿ ಸಂರಕ್ಷಿತ ಪ್ರದೇಶಗಳನ್ನು ಹೊಂದಿದ್ದು, ಜಗತ್ತಿನ ಶೇಕಡ ೭೦ಕ್ಕಿಂತ ಹೆಚ್ಚಿನ ಹುಲಿಗಳನ್ನು ಹೊಂದಿದೆ.

ಪ್ರಾಜೆಕ್ಟ್ ಚೀತಾ, ಏಕ್‌ಪೇಡ್ ಮಾಕೆ ನಾಮ್ ಸೇರಿದಂತೆ ಇನ್ನಿತರ ಹಲವಾರು ಉಪಕ್ರಮಗಳಡಿಯಲ್ಲಿ ವನ್ಯಜೀವಿ ಹಾಗೂ ಪರಿಸರ ಸಂರಕ್ಷಣೆಗೆ ಕೇಂದ್ರ ಸರ್ಕಾರ ಕ್ರಮಕೈಗೊಂಡಿದೆ. ಇಂದು ವಿಶ್ವ ವನ್ಯಜೀವಿ ದಿನ. ಈ ಹಿನ್ನೆಲೆ ಪ್ರಧಾನಿ ನರೇಂದ್ರ ಮೋದಿ ವನ್ಯಜೀವಿ ಪ್ರೇಮಿಗಳು ಹಾಗೂ ವನ್ಯಜೀವಿಗಳ ಬಗ್ಗೆ ಕಾಳಜಿ ಹೊಂದಿರುವ ಪರಿಸರವಾದಿಗಳಿಗೆ ವಿಶ್ವ ವನ್ಯಜೀವಿ ದಿನದ ಶುಭಾಶಯ ಕೋರಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ವಿಡಿಯೋ ಸಂದೇಶ ಹಂಚಿಕೊಂಡಿರುವ ಅವರು, ಪರಿಸರವನ್ನು ಸಂರಕ್ಷಿಸುವುದು ಭಾರತೀಯ ಸಂಸ್ಕೃತಿಯ ಭಾಗವಾಗಿದೆ. ಪರಿಸರ ವ್ಯವಸ್ಥೆ ಹಾಗೂ ಆರ್ಥಿಕತೆ ನಡುವೆ ಸಾಮರಸ್ಯ ಹೊಂದಿರುವುದು ಭಾರತದ ವಿಶೇಷತೆಯಾಗಿದೆ ಎಂದು ಹೇಳಿದ್ದಾರೆ.

**<><*<><>*><>**

ವಿಶ್ವವನ್ಯಜೀವಿ ದಿನದ ಅಂಗವಾಗಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ಗುಜರಾತ್‌ನ ಜುನಾಗಢ್ ಜಿಲ್ಲೆಯ ಸಸಾನ್ ಗಿರ್‌ನಲ್ಲಿ ರಾಷ್ಟ್ರೀಯ ವನ್ಯಜೀವಿ ಮಂಡಳಿಯ ೭ನೇ ಸಭೆ ನಡೆಯಿತು. ಸಭೆಯಲ್ಲಿ ಪರಿಸರ ಸಚಿವ ಭೂಪೇಂದ್ರ ಯಾದವ್, ವಿವಿಧ ರಾಜ್ಯಗಳ ಪ್ರತಿನಿಧಿಗಳು, ಸರ್ಕಾರೇತರ ಸಂಸ್ಥೆಗಳ ಪ್ರತಿನಿಧಿಗಳು ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು. ಬಳಿಕ ಪ್ರಧಾನಿ, ಜುನಾಗಡ್‌ನಲ್ಲಿ ರಾಷ್ಟ್ರೀಯ ವನ್ಯಜೀವಿಗಳ ಕೇಂದ್ರಕ್ಕೆ ವರ್ಚುವಲ್ ಮೂಲಕ ಶಂಕುಸ್ಥಾಪನೆ ನೆರವೇರಿಸಿದರು. ಇದರ ಜೊತೆಗೆ ಅವರು, ೧೬ನೇ ಏಷ್ಯಾಟಿಕ್ ಸಿಂಹಗಳ ಜನಸಂಖ್ಯಾ ಅಂದಾಜು - ೨೦೨೫ ಮತ್ತು ಕೊಯಮತ್ತೂರಿನಲ್ಲಿ ಮಾನವ ವನ್ಯಜೀವಿ ಸಂಘರ್ಷ ನಿರ್ವಹಣೆಯ ಸೆಕಾನ್ ವರದಿಯನ್ನು ಅನಾವರಣಗೊಳಿಸಿದರು. ಸಭೆಗೂ ಮುನ್ನ ಪ್ರಧಾನಿ ಗಿರ್ ರಾಷ್ಟ್ರೀಯ ಉದ್ಯಾನದಲ್ಲಿ ಅರಣ್ಯ ಸಫಾರಿ ಕೈಗೊಂಡರು. ಇದೇ ವೇಳೆ ಅವರು, ವನ್ಯಜೀವಿಗಳ ರಕ್ಷಣೆ ಮತ್ತು ನಿರ್ವಹಣೆಗೆ ಗಸ್ತು ತಿರುಗುವ ದ್ವಿಚಕ್ರ ವಾಹನಗಳಿಗೆ ಹಸಿರು ನಿಶಾನೆ ತೋರಿದರು ಹಾಗೂ ಅಲ್ಲಿನ ಸಿಬ್ಬಂದಿಯೊಂದಿಗೆ ಸಂವಾದ ನಡೆಸಿದ್ದರು.

**<><*<><>*><>**

ಕರ್ನಾಟಕ ವಿಧಾನಮಂಡಲದ ಬಜೆಟ್ ಅಧಿವೇಶನ ಇಂದು ಆರಂಭವಾಗಿದ್ದು, ವಿಧಾನಸೌಧದಲ್ಲಿಂದು ಜಂಟಿ ಸದನವನ್ನು ಉದ್ದೇಶಿಸಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್

ಭಾಷಣ ಮಾಡಿದರು. ಈ ವೇಳೆ ಅವರು, ಕರ್ನಾಟಕದ ಅಭ್ಯುದಯಕ್ಕೆ ರಾಜ್ಯಸರ್ಕಾರ ಕೈಗೊಂಡಿರುವ ಹಲವಾರು ಯೋಜನೆಗಳ ಬಗ್ಗೆ ಮಾಹಿತಿ ನೀಡಿ ಮೆಚ್ಚುಗೆ ವ್ಯಕ್ತಪಡಿಸಿದರು. ಕರ್ನಾಟಕ ವಿದೇಶಿ ಬಂಡವಾಳ ಹೂಡಿಕೆಯಲ್ಲಿ ೨ನೇ ಸ್ಥಾನದಲ್ಲಿದ್ದು, ಜಿಎಸ್‌ಟಿ ಬೆಳವಣಿಗೆ ದರ ಉತ್ತಮವಾಗಿದೆ. ಸರ್ಕಾರ ರಾಜ್ಯದ ಅಭಿವೃದ್ಧಿಯ ವೇಗವನ್ನು ಚುರುಕುಗೊಳಿಸುವುದರ ಜೊತೆಗೆ ಹಣಕಾಸು ವ್ಯವಸ್ಥೆಯನ್ನು ಸದೃಢಗೊಳಿಸುವಲ್ಲಿ ಯಶಸ್ವಿಯಾಗಿದೆ ಎಂದು ರಾಜ್ಯಪಾಲರು ತಿಳಿಸಿದರು. ಈ ಬಾರಿ ರಾಜ್ಯದಲ್ಲಿ ಉತ್ತಮ ಮಳೆಯಾಗಿದ್ದು, ರೈತರ ಆದಾಯ ಹೆಚ್ಚಿದೆ. ರೈತರ ಆತ್ಮಹತ್ಯೆ ಪ್ರಕರಣಗಳು ಗಣನೀಯವಾಗಿ ಕಡಿಮೆಯಾಗಿದೆ. ಬೆಳೆಗಳ ಬೆಲೆ ಕುಸಿತದ ಸಮಯದಲ್ಲಿ ಸರ್ಕಾರ ರೈತರಿಗೆ ಬೆನ್ನೆಲುಬಾಗಿ ನಿಂತಿದೆ. ಸರ್ಕಾರ ಜಾರಿಗೊಳಿಸಿರುವ ಪಂಚಖಾತ್ರಿ ಯೋಜನೆಗಳಿಗೆ ೫೨ ಸಾವಿರ ಕೋಟಿಗೂ ಹೆಚ್ಚಿನ ಸಂಪನ್ಮೂಲಗಳನ್ನು ಒದಗಿಸಲಾಗುತ್ತಿದೆ. ೫ ಗ್ಯಾರಂಟಿ ಯೋಜನೆಗಳಿಗಾಗಿ ೭೦ ಸಾವಿರ ಕೋಟಿ ರೂಪಾಯಿಯನ್ನು ನೇರವಾಗಿ ಜನರ ಖಾತೆಗಳಿಗೆ ವರ್ಗಾಯಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು. ಹಣಕಾಸು ಖಾತೆಯನ್ನೂ ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇದೇ ೭ ರಂದು ಕರ್ನಾಟಕದ ಮುಂಗಡಪತ್ರವನ್ನು ಮಂಡಿಸಲಿದ್ದು, ಅಧಿವೇಶನ ಇದೇ ೨೧ರವರೆಗೆ ನಡೆಯಲಿದೆ.

<><*<><>*><>

ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ, ಡೈರಿ ವಲಯದಲ್ಲಿ ಸುಸ್ಥಿರತೆ ಕುರಿತ ಕಾರ್ಯಾಗಾರವನ್ನು ನವದೆಹಲಿಯಲ್ಲಿ ಇಂದು ಉದ್ಘಾಟಿಸಿದರು. ಪರಿಸರ ಕಾಳಜಿಯೊಂದಿಗೆ ಆರ್ಥಿಕ ಬೆಳವಣಿಗೆಯೊಂದಿಗೆ ಸುಸ್ಥಿರ ಡೈರಿ ಕೃಷಿಯನ್ನು ಉತ್ತೇಜಿಸುವ ಗುರಿ ಹೊಂದಿರುವ ಸಹಕಾರ ಸಚಿವಾಲಯ, ಮತ್ತು ಪಶುಸಂಗೋಪನೆ, ಹೈನುಗಾರಿಕೆ ಮತ್ತು ಮೀನುಗಾರಿಕೆ ಸಚಿವಾಲಯದ ನೀತಿಗಳು ಮತ್ತು ಉಪಕ್ರಮಗಳ ಕುರಿತು ಈ ಕಾರ್ಯಾಗಾರ ಜರುಗುತ್ತಿದೆ. ಇದೇ ವೇಳೆ, ವಿವಿಧ ರಾಜ್ಯಗಳಲ್ಲಿ ಜೈವಿಕ ಅನಿಲ ಸ್ಥಾವರಗಳ ಸ್ಥಾಪನೆಗಾಗಿ ಹಲವು ಒಡಂಬಡಿಕೆಗಳಿಗೆ ಸಹಿ ಹಾಕಲಾಯಿತು. ಕಾರ್ಯಾಗಾರದಲ್ಲಿ ಡೈರಿ ತ್ಯಾಜ್ಯವನ್ನು ಜೈವಿಕ ಅನಿಲ, ಸಂಕುಚಿತ ಜೈವಿಕ ಅನಿಲ ಮತ್ತು ಸಾವಯವ ಗೊಬ್ಬರಗಳಾಗಿ ಪರಿವರ್ತಿಸುವ, ಸುಸ್ಥಿರ ಗೊಬ್ಬರ ನಿರ್ವಹಣಾ ಮಾದರಿಗಳ ಕುರಿತು ಸಂವಾದ ನಡೆಯಲಿದೆ.

<><*<><>*><>

ನವದೆಹಲಿಯಲ್ಲಿಂದು ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್, ಬೆಲ್ಜಿಯಂ ಉಪಪ್ರಧಾನಿ ಹಾಗೂ ವಿದೇಶಾಂಗ ಸಚಿವ ಮ್ಯಾಗ್ಸಿಮ್ ಪ್ರವಟ್ ಅವರೊಂದಿಗೆ ಸಭೆ ನಡೆಸಿದರು. ಈ ವೇಳೆ ಮಾತನಾಡಿದ ಅವರು, ಭಾರತ ಹಾಗೂ ಬೆಲ್ಜಿಯಂ ಐತಿಹಾಸಿಕ ಸಂಬಂಧಗಳನ್ನು ಹೊಂದಿದೆ. ವ್ಯಾಪಾರ, ಕೈಗಾರಿಕೆ, ಶಿಕ್ಷಣ, ನಾವಿನ್ಯತೆ, ಸಾಂಸ್ಕೃತಿಕ ಕ್ಷೇತ್ರಗಳಲ್ಲಿ

ಉಭಯ ರಾಷ್ಟ್ರಗಳು ಉತ್ತಮ ಹಾಗೂ ಸ್ಥಿರ ಸಂಬಂಧಗಳನ್ನು ಸ್ಥಾಪಿಸಿವೆ. ಇನ್ನು ಸೆಮಿಕಂಡೆಕ್ಟರ್, ಕೃತಕಬುದ್ಧಿಮತ್ತೆ ಹಾಗೂ ಶುದ್ಧ ಇಂಧನ ಕ್ಷೇತ್ರಗಳಲ್ಲಿ ಸಹಕಾರ ದೊರೆತಂತೆ ಮಾತುಕತೆ ನಡೆಯುತ್ತಿದೆ ಎಂದು ಮಾಹಿತಿ ನೀಡಿದರು.

**ಧ್ವನಿ : ಜೈಶಂಕರ್ (೨೨ ಸೆಕೆಂಡ್‌ಗಳು)**

ರಾಷ್ಟ್ರ ರಾಜಧಾನಿಯಲ್ಲಿ ಇಂದು ಅಪರಾಹ್ನ ಡಾ. ಜೈಶಂಕರ್, ೭ ದಿನಗಳ ಭಾರತ ಭೇಟಿಯಲ್ಲಿರುವ ಬೆಲ್ಜಿಯಂ ರಾಜಕುಮಾರಿ ಆಸ್ಟ್ರಿಡ್ ಅವರೊಂದಿಗೆ ಸಮಾಲೋಚನೆ ನಡೆಸಿದರು. ಆಸ್ಟ್ರಿಡ್ ಅವರು, ನಾಳೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಲಿದ್ದಾರೆ.

**<><*<><>*><>**

೨೦೨೫-೨೬ನೇ ಸಾಲಿನ ದೆಹಲಿ ಸರ್ಕಾರದ ಆಯವ್ಯಯವನ್ನು ಇದೇ ತಿಂಗಳ ಅಂತ್ಯದಲ್ಲಿ ಮಂಡಿಸಲಾಗುವುದು ಎಂದು ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ತಿಳಿಸಿದ್ದಾರೆ. ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ವಿಧಾನಸಭೆಯ ಬಜೆಟ್ ಅಧಿವೇಶನ ಇದೇ ೨೪ ರಿಂದ ೨೬ರವರೆಗೆ ನಡೆಯಲಿದೆ. ಈ ಬಾರಿಯ ಬಜೆಟ್‌ನಲ್ಲಿ ಮಹಿಳೆಯರಿಗೆ ಆರ್ಥಿಕ ನೆರವು, ಆರೋಗ್ಯ ಸೇವೆಗಳ ವಿಸ್ತರಣೆ, ಸಾರ್ವಜನಿಕ ಸಾರಿಗೆಗೆ ಉತ್ತೇಜನ, ಮಾಲಿನ್ಯ ನಿಯಂತ್ರಣ, ಉದ್ಯೋಗ, ವೃದ್ಧರಿಗೆ ನೆರವು, ಯಮುನಾ ನದಿಯ ಸ್ವಚ್ಛತೆ ಸೇರಿದಂತೆ ಹಲವು ವಿಷಯಗಳ ಮೇಲೆ ಕೇಂದ್ರೀಕರಿಸಲಾಗುವುದು ಎಂದಿದ್ದಾರೆ.

**<><*<><>*><>**

ಆಸ್ಕರ್ ಪ್ರಶಸ್ತಿ ಎಂದೇ ಖ್ಯಾತಿ ಪಡೆದಿರುವ ಪ್ರತಿಷ್ಠಿತ ಅಕಾಡೆಮಿ ಪ್ರಶಸ್ತಿ ಪ್ರದಾನ ಸಮಾರಂಭದ ೯೭ನೇ ಆವೃತ್ತಿ ಅಮೆರಿಕಾದ ಲಾಸ್ ಏಂಜಲೀಸ್‌ನಲ್ಲಿಂದು ಮುಕ್ತಾಯಗೊಂಡಿದೆ. ನಿರ್ದೇಶಕ ಸೀನ್ ಬೇಕರ್ ಅವರ "ಅನೋರಾ" ಚಲನಚಿತ್ರ ಐದು ಪ್ರಶಸ್ತಿಗಳನ್ನು ತನ್ನದಾಗಿಸಿಕೊಂಡಿದೆ. "ಅನೋರಾ" ಗೆ ಅತ್ಯುತ್ತಮ ಚಿತ್ರ, ಅತ್ಯುತ್ತಮ ನಿರ್ದೇಶಕಿ, ಅತ್ಯುತ್ತಮ ಮೂಲ ಚಿತ್ರಕಥೆ, ಅತ್ಯುತ್ತಮ ಸಂಕಲನ ಮತ್ತು ಅತ್ಯುತ್ತಮ ನಟಿ ಪ್ರಶಸ್ತಿಗಳು ಲಭಿಸಿವೆ. "ದಿ ಬ್ರೂಟಲಿಸ್ಟ್" ನಲ್ಲಿ ತೋರಿದ ಉತ್ತಮ ನಟನೆಗಾಗಿ ಆಡ್ರಿಯನ್ ಬ್ರಾಡಿ ಅವರು ಅತ್ಯುತ್ತಮ ನಟ ಪ್ರಶಸ್ತಿಯನ್ನು ಪಡೆದರೇ, ಅನೋರಾ ಚಿತ್ರದ ನಟನೆಗಾಗಿ ಮೈಕಿ ಮ್ಯಾಡಿಸನ್  ಎಮಿಲಿಯಾ ಪೆರೆಜ್ ಚಿತ್ರದ ಪಾತ್ರಕ್ಕಾಗಿ ಜೋಯ್ ಸಲ್ಡಾನಾ ಅತ್ಯುತ್ತಮ ಪೋಷಕ ನಟಿ ಪ್ರಶಸ್ತಿ ಗೆದ್ದಿದ್ದು, ಇದು ಅವರ ಮೊದಲನೇ ಅಕಾಡೆಮಿ ಪ್ರಶಸ್ತಿಯಾಗಿದೆ. ಏತನ್ಮಧ್ಯೆ, 'ಎ ರಿಯಲ್ ಪೇನ್' ಚಿತ್ರದ ಅಭಿನಯಕ್ಕಾಗಿ ಕೀರನ್ ಕಲ್ಕಿನ್ ಅತ್ಯುತ್ತಮ ಪೋಷಕ ನಟ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡರು. ಅತ್ಯುತ್ತಮ ಧ್ವನಿ ಮತ್ತು ಅತ್ಯುತ್ತಮ ದೃಶ್ಯ ತಂತ್ರಜ್ಞಾನಗಳಿಗಾಗಿ ಡ್ಯೂನ್: ಭಾಗ ಎರಡು ಆಸ್ಕರ್

ಪ್ರಶಸ್ತಿಗಳನ್ನು ಗಳಿಸಿತು. ‘ವಿಕ್ಡ್’ ಚಿತ್ರದ ಭಾಗವಾದ ವಸ್ತ್ರ ವಿನ್ಯಾಸಕ ಪಾಲ್ ಟೇಜ್‌ವೆಲ್, ಅತ್ಯುತ್ತಮ ವಸ್ತ್ರ ವಿನ್ಯಾಸ ಪ್ರಶಸ್ತಿಯನ್ನು ಗೆದ್ದರು.

**<><*<><>*><>**

ಪಿಂಕ್‌ಸಿಟಿ ಎಂದೇ ಖ್ಯಾತವಾಗಿರುವ ಜೈಪುರದಲ್ಲಿ, ಏಷ್ಯಾ ಮತ್ತು ಪೆಸಿಫಿಕ್‌ನಲ್ಲಿ ೧೨ ನೇ ಪ್ರಾದೇಶಿಕ ೩ಆರ್ ಮತ್ತು ಸಮಗ್ರ ಆರ್ಥಿಕ ಕಾರ್ಯಕ್ರಮ ನಡೆಯಲಿದೆ. ಮೂರು ದಿನಗಳ ಕಾಲ ನಡೆಯಲಿರುವ ಈ ಕಾರ್ಯಕ್ರಮಕ್ಕೆ ಇಂದು ಜೈಪುರದ ರಾಜಸ್ಥಾನ ಅಂತರರಾಷ್ಟ್ರೀಯ ಕೇಂದ್ರದಲ್ಲಿ ಚಾಲನೆ ಸಿಗಲಿದೆ. "ಏಷ್ಯಾ-ಪೆಸಿಫಿಕ್ ಪ್ರದೇಶದಲ್ಲಿ ಇಂಗಾಲ ಹೊರಸೂಸುವಿಕೆ ಪ್ರಮಾಣವನ್ನು ಕಡಿಮೆಗೊಳಿಸುವ ನಿಟ್ಟಿನಲ್ಲಿ ಸಮಾಜಗಳನ್ನು ಜಾಗೃತಗೊಳಿಸುವುದು" ಎಂಬ ವಿಷಯ ಕುರಿತು, ಕಾರ್ಯಕ್ರಮದಲ್ಲಿ ಚರ್ಚಿಸಲಾಗುವುದು.

**<><*<><>*><>**

ಐಸಿಸಿ ಚಾಂಪಿಯನ್ಸ್ ಕ್ರಿಕೆಟ್ ಟ್ರೋಫಿಯ ಮೊದಲ ಸೆಮಿ ಫೈನಲ್ ಪಂದ್ಯ ನಾಳೆ ದುಬೈನಲ್ಲಿ ನಡೆಯಲಿದ್ದು, ಭಾರತ-ಆಸ್ಟ್ರೇಲಿಯಾ ತಂಡವನ್ನು ಎದುರಿಸಲಿದೆ. ನಾಡಿದ್ದು,೫ ರಂದು ಲಾಹೋರ್ ನಲ್ಲಿ ನ್ಯೂಜಿಲೆಂಡ್, ದಕ್ಷಿಣ ಆಫ್ರಿಕಾ ವಿರುದ್ಧ ಸೆಣಸಲಿದೆ. ಫೈನಲ್ ಪಂದ್ಯ ಇದೇ ೯ ರಂದು ಜರುಗಲಿದೆ.

**<><*<><>*><>**

ಉತ್ತರಪ್ರದೇಶದ ಏಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಮಹಿಳಾ ಪ್ರೀಮಿಯರ್ ಲೀಗ್ ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿಂದು ಯುಪಿ ವಾರಿಯರ್ಸ್ ಹಾಗೂ ಗುಜರಾತ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ <>*><>**